ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 03–06–2019

## ಪತ್ರಿಕಾ ಆಮಂತ್ರಣ

1. **ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ವಿಶ್ವ ಪರಿಸರ ದಿನಾಚರಣೆ :**

**ಉಪಸ್ಥಿತಿ :**

ನ್ಯಾ . ಶ್ರೀ ಅಭಯ ಶ್ರೀನಿವಾಸ ಓಕ,
ಗೌರವಾನ್ವಿತ ಮುಖ್ಯ ನ್ಯಾಯಮೂರ್ತಿಗಳು, ಕರ್ನಾಟಕ ಉಚ್ಚನ್ಯಾಯಾಲಯ
ಹಾಗೂ ಪ್ರಧಾನ ಪೋಷಕರು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ
ನ್ಯಾ . ಶ್ರೀ ಎಲ್. ನಾರಾಯಣ ಸ್ವಾಮಿ,
ಗೌರವಾನ್ವಿತ ನ್ಯಾಯಮೂರ್ತಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ
ಕಾರ್ಯನಿರ್ವಾಹಕ ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ

ದಿನಾಂಕ: 04–06–2019 ಮಂಗಳವಾರ ಸಂಜೆ 4–45 ಗಂಟೆಗೆ
ಸ್ಥಳ : ಕರ್ನಾಟಕ ಉಚ್ಚನ್ಯಾಯಾಲಯದ ಆವರಣ, ಬೆಂಗಳೂರು

## ಪತ್ರಿಕಾ ಪ್ರಕಟಣೆ

### ಅತಿಸಾರ ಭೇದಿ ತಡೆಗಟ್ಟಿ ಮಕ್ಕಳನ್ನು ಸಾವಿನಿಂದ ರಕ್ಷಿಸಿ : ಜಾವೇದ್ ಅಖ್ತರ್

ಬೆಂಗಳೂರು, ಜೂನ್ 3 ( ಕರ್ನಾಟಕ ವಾರ್ತೆ) :

ಭಾರತದಲ್ಲಿ ಐದು ವರ್ಷದೊಳಗಿನ ಮಕ್ಕಳ ಸಾವಿನ ಪ್ರಮಾಣದಲ್ಲಿ ಶೇಕಡಾ 10 ರಷ್ಟು ಮಕ್ಕಳನ್ನು ಬಲಿ ತೆಗೆದುಕೊಳ್ಳುತ್ತಿರುವ ಅತಿಸಾರ ಭೇದಿ ರೋಗವನ್ನು ಸುಲಭವಾಗಿ ತಡೆಗಟ್ಟಬಹುದಾಗಿದ್ದು, ಸಕಾಲದಲ್ಲಿ ಸರಳ

ಮಾರ್ಗೋಪಾಯಗಳನ್ನು ಅನುಸರಿಸುವುದರಿಂದ ಮಕ್ಕಳನ್ನು ಸಾವಿನಿಂದ ರಕ್ಷಿಸಬಹುದಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಜಾವೇದ್ ಅಖ್ತರ್ ಅವರು ತಿಳಿಸಿದರು.

ಇಂದಿನಿಂದ ಜೂನ್ 17 ರ ವರೆಗೆ ರಾಜ್ಯಾದ್ಯಂತ ಆಚರಿಸಲಾಗುತ್ತಿರುವ ತೀವ್ರ ಅತಿಸಾರ ಭೇದಿ ನಿಯಂತ್ರಣಾ ಪಾಕ್ಷಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದ ಅವರು ದಿನದಲ್ಲಿ ಸಾಮಾನ್ಯಕ್ಕಿಂತಲೂ ಹೆಚ್ಚು ಬಾರಿ ಹಾಗೂ ನೀರಾಗಿ ಮಲವಿಸರ್ಜನೆ ಮಾಡುವುದನ್ನು ಅತಿಸಾರ ಭೇದಿ ಎಂದು ಗುರುತಿಸಬಹುದಾಗಿದೆ. ಸಾಮಾನ್ಯವಾಗಿ ಬೇಸಿಗೆ ಕಾಲದಲ್ಲಿ ಮತ್ತು ಮಳೆಗಾಲದಲ್ಲಿ ಅತಿಸಾರ ಭೇದಿ ರೋಗದಿಂದ ಬಳಲುವ ಮಕ್ಕಳ ಸಂಖ್ಯೆ ಹೆಚ್ಚಾಗಿ ಕಾಣಬಹುದು. ಬಡತನ ರೇಖೆಗಿಂತಲೂ ಕೆಳಗಿರುವ ಕುಟುಂಬಗಳಲ್ಲಿ ರೋಗದ ತೀವ್ರತೆ ಅಧಿಕವಾಗಿ ಕಂಡು ಬರುತ್ತದೆ ಎಂದರು.

ವೈದ್ಯರ ಮಾರ್ಗದರ್ಶನದಲ್ಲಿ ಓ ಆರ್ ಎಸ್ ಎಂದೇ ಕರೆಯಲ್ಪಡುವ ಓರಲ್ ರೀ–ಹೈಡ್ರೇಷನ್ ಸಲೂಷನ್ ಮತ್ತು ಜಿಂಕ್ ಮಾತ್ರೆಗಳನ್ನು ಸೇವಿಸುವುದರಿಂದ  ಅತಿಸಾರ ಭೇದಿಯ ಪರಿಣಾಮ ದೇಹದಲ್ಲಿ ಉಂಟಾಗುವ ನಿರ್ಜಲೀಕರಣವನ್ನು ನಿಯಂತ್ರಿಸಬಹುದು. ಶುದ್ಧ ಕುಡಿಯುವ ನೀರು, ಕೈಗಳ ಶುಚಿತ್ವ, ಶೌಚಾಲಯ ಉಪಯೋಗ, ಪರಿಸರ ನೈರ್ಮಲ್ಯ, ಲಸಿಕೆಗಳನ್ನು ಹಾಕಿಸುವುದು, ಪೌಷ್ಠಿಕ ಆಹಾರ ಹಾಗೂ ಸರಿಯಾಗಿ ಎದೆ ಹಾಲು ಉಣಿಸುವುದರಿಂದ ಮಕ್ಕಳಲ್ಲಿ ಅತಿಸಾರ ಭೇದಿಯನ್ನು ತಡೆಗಟ್ಟಬಹುದು ಎಂದು ಜಾವೇದ್ ಅಖ್ತರ್ ಅವರು ಹೇಳಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಂಗನವಾಡಿ ಕಾರ್ಯಕರ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಶಾ ಕಾರ್ಯಕರ್ತರು, ಶಿಕ್ಷಣ ಇಲಾಖೆಯ ಶಿಕ್ಷಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಯ ಕ್ಷೇತ್ರ ಮಟ್ಟದ ಅಧಿಕಾರಿ ಮತ್ತು ಸಿಬ್ಬಂದಿ ತೀವ್ರ ಅತಿಸಾರ ಭೇದಿ ನಿಯಂತ್ರಣಾ ಪಾಕ್ಷಿಕದ ಅವಧಿಯಲ್ಲಿ ಜನ ಸಾಮಾನ್ಯರಲ್ಲಿ ಅತಿಸಾರ ಭೇದಿ ನಿಯಂತ್ರಣ ಕುರಿತಂತೆ ತೀವ್ರತರ ತಿಳುವಳಿಕೆ ಮೂಡಿಸಲಿದ್ದಾರೆ. ಓ ಆರ್ ಎಸ್ ಪೊಟ್ಟಣಗಳನ್ನು ಹಾಗೂ ಜಿಂಕ್ ಮಾತ್ರೆಗಳನ್ನು  ಐದು ವರ್ಷ ವಯೋಮಾನದೊಳಗಿನ ಮಕ್ಕಳು ಇರುವ ಮನೆ ಮನೆಗೆ ತರಳಿ ವಿತರಿಸಲಿದ್ದಾರೆ. ಅಲ್ಲದೆ, ಆ ಕುಟುಂಬದ ಎಲ್ಲಾ ಸದಸ್ಯರಲ್ಲಿ ಮನೆಯ ಶುಚಿತ್ವದ ಕುರಿತಂತೆ ಅರಿವು ಮೂಡಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ತೀವ್ರತರ ಅತಿಸಾರ ಭೇದಿಯಿಂದ ಶೂನ್ಯ ಮಕ್ಕಳ ಮರಣ ಎಂಬ ಧ್ಯೇಯ ವಾಕ್ಯ ಹೊತ್ತ ಈ ಪಾಕ್ಷಿಕದಲ್ಲಿ ರಾಜ್ಯದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ, ತಾಲ್ಲೂಕು ಆಸ್ಪತ್ರೆಗಳಲ್ಲಿ ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಹಾಗೂ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಅತಿಸಾರ ಭೇದಿ ನಿಯಂತ್ರಣ ಚಿಕಿತ್ಸೆಯ ಸೌಲಭ್ಯವಿದೆ ಎಂದು ಅವರು ವಿವರಿಸಿದರು.

ಈ ಮುನ್ನ, ಆಯ್ದ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು, ಶಿಕ್ಷಕರು ಹಾಗೂ  ಐದು ವರ್ಷ ವಯೋಮಾನದೊಳಗಿನ ಮಕ್ಕಳ ಪಾಲಕ–ಪೋಷಕರಿಗೆ ಜಾವೇದ್ ಅಖ್ತರ್ ಅವರು ಓ ಆರ್ ಎಸ್

ಪೊಟ್ಟಣಗಳನ್ನು ಹಾಗೂ ಜಿಂಕ್ ಮಾತ್ರೆಗಳನ್ನು ವಿದ್ಯುಕ್ತವಾಗಿ ವಿತರಿಸಿ ಮಕ್ಕಳಿಗೆ ಕೊಡುವಂತೆ ಸಲಹೆ ನೀಡಿ ತೀವ್ರ ಅತಿಸಾರ ಭೇದಿ ನಿಯಂತ್ರಣಾ ಪಾಕ್ಷಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತ ಪಂಕಜ್ ಕುಮಾರ್ ಪಾಂಡೆ ಅವರು ಅಧ್ಯಕ್ಷತೆ ವಹಿಸಿದ್ದ ಈ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಭಿಯಾನ ನಿರ್ದೇಶಕ ಡಿ ಎಸ್ ರಮೇಶ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕ ಡಾ ಟಿ ಎಸ್ ಪ್ರಭಾಕರ್, ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಪರ ನಿರ್ದೇಶಕ ಡಾ ಓಂ ಪ್ರಕಾಶ್ ಪಾಟೀಲ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್ ಭೃಂಗೀಶ್, ಬೆಂಗಳೂರು ನಗರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಎಸ್ ಪ್ರಕಾಶ್, ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯಾಧಿಕಾರಿ ಡಾ ಸಯ್ಯದ್ ಸಿರಾಜುದ್ದೀನ್ ಮದನಿ, ಮಕ್ಕಳ ಆರೋಗ್ಯ ವಿಭಾಗದ ಉಪ ನಿರ್ದೇಶಕ ಡಾ ಪ್ರಭುದೇವ್ ಜಿ ಗೌಡ ಅವರೂ ಪಾಲ್ಗೊಂಡಿದ್ದರು.

ಡಿ ಪಿ ಎಂ

## <u>ಕೈಗಾರಿಕಾ ತರಬೇತಿ ಸಂಸ್ಥೆಗೆ ಪ್ರವೇಶಕ್ಕೆ ಅರ್ಜಿ ಆಹ್ವಾನ</u>

<u>ಬೆಂಗಳೂರು, ಜೂನ್ 3 (ಕರ್ನಾಟಕ ವಾರ್ತೆ)</u>

**2019-20**ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ವೃತ್ತಿಗಳಲ್ಲಿ ಕೈಗಾರಿಕಾ ತರಬೇತಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಆನ್‌ಲೈನ್ ಮುಖಾಂತರ ಆಹ್ವಾನಿಸಲಾಗಿದೆ. ಸರ್ಕಾರದಿಂದ ನಿಗದಿಪಡಿಸಿದ ಪ್ರವೇಶದ ಬೋಧನಾ ಮತ್ತು ಪರೀಕ್ಷಾ ಶುಲ್ಕದ ಮಾಹಿತಿಯನ್ನು ಪ್ರವೇಶದ ಸಂದರ್ಭದಲ್ಲಿ ನೀಡಲಾಗುವುದು. ವಿವರಗಳು ಕೆಳಕಂಡಂತಿದೆ. ಪ್ರವೇಶಕ್ಕಾಗಿ ನೇರವಾಗಿ ಕಛೇರಿ ಹಾಗೂ ಪ್ರಾಚಾರ್ಯರಲ್ಲಿ ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 080-26562307 ಅಥವಾ **www.emptrg.kar.nic.in** **or** **www.detkarnataka.org.in** ನ್ನು ಸಂಪರ್ಕಿಸಬಹುದಾಗಿದೆ.

## TRADES OFFERED

| Sl. No. | Trade | Duration | Qualification | Strength |
|---|---|---|---|---|
| 1 | Carpentry | 1 year | 10th pass | 24 |
| 2 | Computer Operator and Programming Assistant | 1 year | 10th pass | 48 |
| 3 | Dress Making | 1 year | 10th pass | 20 |
| 4 | Mechanic Diesel | 1 year | 10th pass | 40 |
| 5 | Sewing Technology | 1 year | 10th pass | 40 |
| 6 | Sheet Metal Worker | 1 year | 10th fail | 40 |
| 7 | Welder | 1 year | 10th pass | 80 |
| 8 | Draughtsman (Civil) | 2 years | 10th pass | 24 |
| 9 | Draughtsman (Mechanical) | 2 years | 10th pass | 20 |
| 10 | Electrician | 2 years | 10th pass | 100 |
| 11 | Electronic Mechanic | 2 years | 10th pass | 72 |
| 12 | Electroplater | 2 years | 10th pass | 20 |
| 13 | Fitter | 2 years | 10th pass | 80 |
| 14 | Information & Communication Technology System Maintenance | 2 years | 10th pass | 24 |
| 15 | Instrument Mechanic | 2 years | 10th pass | 48 |
| 16 | Machinist | 2 years | 10th pass | 48 |
| 17 | Machinist (Grinder) | 2 years | 10th pass | 32 |
| 18 | Mechanic Machine Tool Maintenance | 2 years | 10th pass | 20 |
| 19 | Mechanic (Motor Vehicle) | 2 years | 10th pass | 20 |
| 20 | Mechanic(Refrigeration and Air-conditioning) | 2 years | 10th pass | 24 |
| 21 | Tool and Die Maker (Press Tools, Jigs and Fixture) | 2 years | 10th pass | 40 |
| 22 | Turner | 2 years | 10th pass | 64 |
| | TOTAL | | | **928** |

## ಎಸಿಬಿ ದಾಳಿ

**ಬೆಂಗಳೂರು, ಜೂನ್ 3 (ಕರ್ನಾಟಕ ವಾರ್ತೆ)**

ಬೆಂಗಳೂರು ನಗರದ ನಿವಾಸಿಯೊಬ್ಬರು ಸ್ನೂಕರ್ ಪಾರ್ಲರ್ ನಡೆಸಲು ಟ್ರೇಡ್ ಲೈಸನ್ಸ್ ಪಡೆಯುವ ಸಲುವಾಗಿ ಅರಕೆರೆ ಬಿಬಿಎಂಪಿ ಕಛೇರಿಯಲ್ಲಿ ಅರ್ಜಿಯನ್ನು ಸಲ್ಲಿಸಿಕೊಂಡಿರುತ್ತಾರೆ.

ಶ್ರೀ.ಪ್ರದೀಪ್, ಹೆಲ್ತ್ ಇನ್ಸ್‌ಪೆಕ್ಟರ್, ಅರಕೆರೆ ವಾರ್ಡ್, ಬೊಮ್ಮನಹಳ್ಳಿ ವಲಯ ಕಛೇರಿ, ಬಿಬಿಎಂಪಿ ಬೆಂಗಳೂರು ಇವರು ಟ್ರೇಡ್ ಲೈಸನ್ಸ್ ನೀಡುವ ಸಲುವಾಗಿ ದೂರುದಾರರಿಗೆ ರೂ.10,000/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:03.06.2019 ರಂದು ಶ್ರೀ.ಪ್ರದೀಪ್, ಹೆಲ್ತ್ ಇನ್ಸ್‌ಪೆಕ್ಟರ್ ಇವರು ದೂರುದಾರರಿಂದ ರೂ.8,000/- ಲಂಚದ ಹಣವನ್ನು ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ನಗರ ಠಾಣೆಯ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಕರಣದ ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

## ಪ್ರಕೃತಿ ವಿಕೋಪ ನಿರ್ವಹಣಾ ಕ್ರಿಯಾ ಯೋಜನೆ ಪರಿಷ್ಕರಣೆ ಕಾರ್ಯಾಗಾರ

**ಬೆಂಗಳೂರು, ಜೂನ್ 3 (ಕರ್ನಾಟಕ ವಾರ್ತೆ)**

ಬೆಂಗಳೂರು ನಗರ ಜಿಲ್ಲಾ ತರಬೇತಿ ಸಂಸ್ಥೆ, ಮೈಸೂರು ಆಡಳಿತ ತರಬೇತಿ ಸಂಸ್ಥೆ, ಜಿಲ್ಲಾ ವಿಕೋಪ ನಿರ್ವಹಣಾ ಪ್ರಾಧಿಕಾರ ಹಾಗೂ ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ಕಚೇರಿ ಸಹಯೋಗದಲ್ಲಿ ವಿಕೋಪ ನಿರ್ವಹಣಾ ಯೋಜನೆ ಪರಿಷ್ಕರಣೆ ಹಾಗೂ ವಿಕೋಪ ಮಿತಗೊಳಿಸುವಿಕೆ, ಪೂರ್ವಸಿದ್ದತೆ ಹಾಗೂ ಸ್ಪಂದನಾ ಯೋಜನೆಯ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ತರಬೇತಿಯ ಉದ್ಘಾಟನೆಯನ್ನು ಸಂಸ್ಥೆಯ ನಿರ್ದೇಶಕರು ಹಾಗೂ ಪ್ರಾಚಾರ್ಯ ಚಂದ್ರನಾಯಕ್ ಅವರು ಉದ್ಘಾಟಿಸಿದರು. ಸಮಾರಂಭದಲ್ಲಿ ತರಬೇತಿಯ ಸಂಯೋಜಕರಾದ ಅಲೆಕ್ಸ್‌ಲೋಬೋ, ಪ್ರಾಚಾರ್ಯರಾದ ಶ್ರೀಮತಿ ಕೆ. ರಾಧ, ಉಪನ್ಯಾಸಕ ರಘು ಇವರುಗಳು ಉಪಸ್ಥಿತರಿದ್ದರು.

ಈ ತರಬೇತಿಯು ಪ್ರಕೃತಿ ವಿಕೋಪ ನಿರ್ವಹಣಾ ಕ್ರಿಯಾ ಯೋಜನೆ ಪರಿಷ್ಕರಣೆ ಹಾಗೂ ತಯಾರಿಕೆಯ ಪೂರ್ವ ಸಿದ್ದತೆಯ ಬಗ್ಗೆ ಒಳಗೊಂಡಿದ್ದು ಜಿಲ್ಲಾಮಟ್ಟದ ಅಧಿಕಾರಿಗಳು ಈ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.